ನಿಯಮಗಳಡಿ ಭರ್ತಿ ಮಾಡಲು ಪ್ರಕ್ರಿಯೆ ಪ್ರಗತಿಯಲ್ಲಿದೆ. ಇತರೆ ವೃಂದಗಳಾದ ಜಾನುವಾರು ಅಧಿಕಾರಿ, ಹಿರಿಯ ಪಶುವೈದ್ಯಕೀಯ ಪರೀಕ್ಷಕರು, ಪಶುವೈದ್ಯಕೀಯ ಪರೀಕ್ಷಕರು, ಅಧೀಕ್ಷಕರ ಹುದ್ದೆಗಳನ್ನು ಮುಂಬಡ್ತಿ ನೀಡುವ ಸಂದರ್ಭದಲ್ಲಿ ಆದ್ಯತೆ ಮೇಲೆ ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

ಪಶುವೈದ್ಯಕೀಯ ಸಹಾಯಕರು, ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರು, ವಾಹನ ಚಾಲಕರು, ಬೆರಳಚ್ಚುಗಾರರು, ಡಿ ದರ್ಜೆ ಹುದ್ದೆಗಳನ್ನು ನೇರ ನೇಮಕಾತಿ ಹಾಗೂ ಮುಂಬಡ್ತಿ ಮೂಲಕ ಆದ್ಯತೆಯ ಮೇಲೆ ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

ಪ್ರಸ್ತುತ ಸಾಲಿನಲ್ಲಿ ಔಷಧಗಳ ಸರಬರಾಜಿಗಾಗಿ ₹. 32 ಕೋಟಿ ಅನುದಾನ ನಿಗದಿಪಡಿಸಲಾಗಿರುತ್ತದೆ. ನಿಗದಿಪಡಿಸಿರುವ ಅನುದಾನದಲ್ಲಿ ರಾಜ್ಯದ ಪಶುವೈದ್ಯ ಸಂಸ್ಥೆಗಳಿಗೆ ₹. 15 ಕೋಟಿ ಅನುದಾನದಲ್ಲಿ ಜಿಲ್ಲೆಗಳಿಗೆ ಸರಬರಾಜು ಮಾಡಲಾಗಿದೆ. ಉಳಿದ ಅನುದಾನದಲ್ಲಿ ಔಷಧಗಳನ್ನು ಸರಬರಾಜು ಮಾಡಲಾಗುವುದು.

ಪಶು ಚಿಕಿತ್ಸಾಲಯದ ಕಟ್ಟಡ

18 (169); ಶ್ರೀ ಬಣಕಾರ್ ಯು.ಬಿ (ಹಿರೇಕೆರೂರು)

ಅ) ಹಿರೇಕೆರೂರು ತಾಲ್ಲೂಕು ಗುಡ್ಡದ ಮಾದಾಪುರ, ಹಂಸಭಾವಿ, ಸಾಲೇನಹಳ್ಳಿ, ಪಶು ಚಿಕಿತ್ಸಾಲಯದ ಕಟ್ಟಡ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) 2015–16ನೇ ಸಾಲಿನಲ್ಲಿ ಈ ಪಶುಚಿಕಿತ್ಸಾಲಯಗಳಿಗೆ ಕಟ್ಟಡ ಕಟ್ಟುವುದರ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ;

ಇ) 2015–16ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಪಶುಚಿಕಿತ್ಸಾಲಯಗಳಿಗೆ ಕಟ್ಟಡ ಕಟ್ಟುವುದರ ಬಗ್ಗೆ ಯೋಜನೆ ರೂಪಿಸಲಾಗಿದೆ?

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು)

ಅ) ಹೌದು.

ಆ) 2014–15ನೇ ಸಾಲಿನ ಆರ್.ಐ.ಡಿ.ಎಫ್ XX ಯೋಜನೆಯ ಅಡಿಯಲ್ಲಿ ಹಾವೇರಿ ಜಿಲ್ಲೆ ಹಿರೇಕೆರೂರು ತಾಲ್ಲೂಕಿನ ಹಂಸಭಾವಿ ಪಶು ಚಿಕಿತ್ಸಾಲಯ ಕಟ್ಟಡ ನಿರ್ಮಾಣಕ್ಕಾಗಿ ₹. 27.25 ಲಕ್ಷಗಳ ಅನುದಾನಕ್ಕೆ ಮಂಜೂರಾತಿ ದೊರೆತಿದೆ.

ಅನುದಾನ ಲಭ್ಯತೆಗೆ ಅನುಗುಣವಾಗಿ ಹಂತ ಹಂತವಾಗಿ ಕಟ್ಟಡ ನಿರ್ಮಾಣಕ್ಕೆ ಕ್ರಮವಹಿಸಲಾಗುವುದು.

ಇ) ಆರ್.ಐ.ಡಿ.ಎಫ್ XX ಯೋಜನೆ ಅಡಿಯಲ್ಲಿ ರಾಜ್ಯದಲ್ಲಿ ಕಟ್ಟಡ ಹೊಂದಿಲ್ಲದೇ ಇರುವ 189 ಪಶುವೈದ್ಯಕೀಯ ಸಂಸ್ಥೆಗಳಿಗೆ ಕಟ್ಟಡ ನಿರ್ಮಾಣಕ್ಕಾಗಿ ಮಂಜೂರಾತಿ ನೀಡಲಾಗಿದ್ದು ಅನುದಾನ ಲಭ್ಯತೆ ಅನುಸಾರ ಹಂತ ಹಂತವಾಗಿ ಕಟ್ಟಡ ನಿರ್ಮಾಣ ಕಾರ್ಯಕ್ರಮ ಹಮ್ಮಿಕೊಳ್ಳಲು ಕ್ರಮ ವಹಿಸಲಾಗುವುದು.

ಪಶು ಚಿಕಿತ್ಸಾಲಯಗಳಿಗೆ ಕಡಿಮೆ ಪ್ರಮಾಣದಲ್ಲಿ ಔಷಧಿಗಳ ಪೂರೈಕೆ

20 (171); ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು)

ಅ) ಈಗ ಸದ್ಯ ಪಶುಚಿಕಿತ್ಸಾಲಯಗಳಿಗೆ, ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರ, ಪಶು ಆಸ್ಪತ್ರೆಗಳಿಗೆ ಪೂರೈಕೆ ಆಗುತ್ತಿರುವ ಔಷಧದ ಮೊತ್ತ ಎಷ್ಟು?

ಆ) ಪ್ರಸ್ತುತ ಪೂರೈಕೆ ಆಗುತ್ತಿರುವ ಔಷಧ ಕಡಿಮೆ ಆಗಿರುವುದರಿಂದ, ಜಾನುವಾರುಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಇ) ಪೂರೈಕೆ ಆಗುತ್ತಿರುವ ಔಷಧವನ್ನು ಹೆಚ್ಚಿಸುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ?